ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 1271 (1419)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

ವಿಷಯ : ಕೊಡವರ ಕುಲಶಾಸ್ತ್ರೀಯ ಅಧ್ಯಯನ ಕುರಿತು

(ಅ) ಕೊಡವರ ಕುಲಶಾಸ್ತ್ರೀಯ ಅಧ್ಯಯನ ಕಾರ್ಯ ಪ್ರಾರಂಭವಾಗಿದೆಯೇ ; ಪ್ರಾರಂಭವಾಗಿದ್ದಲ್ಲಿ, ಅಧ್ಯಯನ ಕಾರ್ಯದ ಪ್ರಗತಿ ಯಾವ ಹಂತದಲ್ಲಿದೆ ; ಈ ಬಗ್ಗೆ ಅಧಿಕೃತ ಆದೇಶ ಮತ್ತು ಇತರೆ ಸಂಪೂರ್ಣ ವಿವರಗಳನ್ನು ಒದಗಿಸುವುದು ;

(ಆ) ಕೊಡವರ ಕುಲಶಾಸ್ತ್ರೀಯ ಅಧ್ಯಯನ ಕಾರ್ಯವನ್ನು ಕೈಗೊಂಡಿರುವ ಸಂಸ್ಥೆ ಯಾವುದು ಮತ್ತು ಸದರಿ ಸಂಸ್ಥೆಗೆ ವರದಿ ನೀಡಲು ಯಾವ ಕಾಲಮಿತಿಯನ್ನು ನಿಗದಿಗೊಳಿಸಲಾಗಿದೆ ;

(ಇ) ಸದರಿ ಅಧ್ಯಯನ ಕಾರ್ಯ ಕೈಗೊಂಡಿರುವ ಸಂಸ್ಥೆಯು, ನಿಗದಿಪಡಿಸಿದ ಕಾಲಮಿತಿಯೊಳಗೆ ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ಸೂಚಿಸಲಾಗಿದೆಯೇ ?